# ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ನಡವಳಿಗಳು

ವಿಷಯ: ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕಿನ ಉರ್ದು ಕೆ.ಜಿ.ಬಿ.ವಿ ಹೆಣ್ಣು ಮಕ್ಕಳ ವಸತಿ ಶಾಲೆ ಕಟ್ಟಡ ನಿರ್ಮಾಣ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡುವ ಕುರಿತು

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 124 ಎಂಡಿಎಸ್ 2016, ದಿ:16.04.2016.
2. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 124 ಎಂಡಿಎಸ್ 2016, ದಿ:24.08.2016.
3.

<><><>

ಪ್ರಸ್ತಾವನೆ:-

ಉಲ್ಲೇಖ (1)ರ ಸರ್ಕಾರದ ಆದೇಶದಲ್ಲಿ 2015-16ನೇ ಸಾಲಿನಲ್ಲಿ ಚಾಲ್ತಿಯಿದ್ದ ಯೋಜನಾ ಕಾರ್ಯಕ್ರಮಗಳನ್ನು 2016-17ನೇ ಸಾಲಿನವರೆಗೆ ಮುಂದುವರೆಸಿ ಆದೇಶ ಹೊರಡಿಸಲಾಗಿದೆ. ಉಲ್ಲೇಖ (2)ರ ಸರ್ಕಾರಿ ಆದೇಶದಲ್ಲಿ ವಿವಿಧ ಕಾರ್ಯಕ್ರಮಗಳಿಗೆ ಒದಗಿಸಲಾದ ಆಯವ್ಯಯದಲ್ಲಿ ಎರಡನೇ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡಲಾಗಿದೆ.

ಉಲ್ಲೇಖ(3)ರಲ್ಲಿ ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕಿನ ಉರ್ದು ಕೆ.ಜಿ.ಬಿ.ವಿ ವಸತಿ ಶಾಲೆ ಕಟ್ಟಡ ನಿರ್ಮಾಣ ಕಾರ್ಯಕ್ಕಾಗಿ ಸರ್ವ ಶಿಕ್ಷಣ ಅಭಿಯಾನದ ರಾಜ್ಯ ಯೋಜನಾ ನಿರ್ದೇಶಕರು ಕೋರಿರುವ 113.55 ಲಕ್ಷಗಳನ್ನು ಮಾನ್ಯ ಮುಖ್ಯಮಂತ್ರಿಗಳ ಅಭಿವೃದ್ಧಿ ಯೋಜನೆಯ ಲೆಕ್ಕಶೀರ್ಷಿಕೆ: 4225-03-277-2-10 (386) ರಡಿಯಲ್ಲಿ ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಪ್ರಯುಕ್ತ ಸರ್ಕಾರದ ಆದೇಶದಂತೆ, ಸಿಂಧನೂರು ತಾಲ್ಲೂಕಿನ ಉರ್ದು ಕೆ.ಜಿ.ಬಿ.ವಿ ಹೆಣ್ಣು ಮಕ್ಕಳ ವಸತಿ ಶಾಲೆ ಕಟ್ಟಡ ನಿರ್ಮಾಣಕ್ಕೆ ರೂ.113.55 ಲಕ್ಷ (ರೂ. ಒಂದು ಕೋಟಿ ಹದಿಮೂರು ಲಕ್ಷದ ಐವತ್ತೈದು ಸಾವಿರ ಮಾತ್ರ)ಗಳನ್ನು ಜಿಲ್ಲಾಧಿಕಾರಿಗಳು ರಾಯಚೂರು ಜಿಲ್ಲೆರವರಿಗೆ ಬಿಡುಗಡೆ ಮಾಡಲು ನಿರ್ಧರಿಸಿದ್ದು ಆದರಂತೆ ಈ ಆದೇಶ.

**ಆದೇಶ**

**ಸಂಖ್ಯೆ: ಅಸಂನಿ/ಉಕೆಜಿಬಿವಿ/ಕಟ್ಟಡ/ಸಿಆರ್-53/2016-17** \1957 **ದಿನಾಂಕ:04.11.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನಾಧರಿಸಿ ಉಲ್ಲೇಖ(3)ರ ಸರ್ಕಾರದ ಆದೇಶದಂತೆ ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕಿನ ಉರ್ದು ಕೆ.ಜಿ.ಬಿ.ವಿ ಹೆಣ್ಣು ಮಕ್ಕಳ ವಸತಿ ಶಾಲೆ ಕಟ್ಟಡ ನಿರ್ಮಾಣ ಕಾಮಗಾರಿಗೆ ರೂ.113.55 ಲಕ್ಷ(ರೂ. ಒಂದು ಕೋಟಿ ಹದಿಮೂರು ಲಕ್ಷದ ಐವತ್ತೈದು ಸಾವಿರ ಮಾತ್ರ)ಗಳನ್ನು ಜಿಲ್ಲಾಧಿಕಾರಿಗಳು ರಾಯಚೂರು ಜಿಲ್ಲೆರವರಿಗೆ ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಅನುದಾನ ಬಿಡುಗಡೆ ಮಾಡಿದೆ.

**ನಿಬಂಧನೆಗಳು:-**

1. ಆದೇಶದಲ್ಲಿ ಯಾವ ಉದ್ದೇಶಕ್ಕೆ ಅನುದಾನ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಬಳಸತಕ್ಕದ್ದು. ಯಾವುದೇ ಕಾರಣಕ್ಕೂ ಅನುದಾನವನ್ನು ಮಾರ್ಗಪಲ್ಲಟ ಮಾಡುವಂತಿಲ್ಲ.
2. ಬಿಡುಗಡೆಯಾದ ಅನುದಾನಕ್ಕೆ ಕಾಮಗಾರಿಯ ಪ್ರಗತಿ ವರದಿ ಮತ್ತು ಹಣಬಳಕೆ ಪ್ರಮಾಣ ಪತ್ರ ಹಾಗೂ ಕಟ್ಟಡದ ಛಾಯಾಚಿತ್ರವನ್ನು ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು.
3. ಕಾಮಗಾರಿ ಮುಗಿದ ನಂತರ ಗುಣಮಟ್ಟವನ್ನು 3ನೇ ಪಾರ್ಟಿಯಿಂದ ತಪಾಸಣೆ ನಡೆಸಿ ವರದಿ ನೀಡುವುದು.

ರವಾನಿಸಿದೆ
ದಿನಾಂಕ 5/11/16

F:\Chaithra\latha\Release order (1).docx

ಇದಕ್ಕೆ ತಗಲುವ ವೆಚ್ಚವನ್ನು ಅಬೆಕ್ಟ್ ಕೋಡ್ (386) ಲೆಕ್ಕಶೀರ್ಷಿಕೆ 4225-03-277-2-10 (386) ಮಾನ್ಯ ಮುಖ್ಯ ಮಂತ್ರಿಗಳ ಅಭಿವೃದ್ಧಿ ಯೋಜನೆಯಡಿ ರಾಜ್ಯವಲಯ ಯೋಜನೆಯಡಿ 2016-17ನೇ ಸಾಲಿನಲ್ಲಿ ಒದಗಿಸಲಾದ ಅನುದಾನದಲ್ಲಿ ಭರಿಸತಕ್ಕದ್ದು.

(ಅಕ್ರಂ ಪಾಷ)
ನಿರ್ದೇಶಕರು
ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ
ಬೆಂಗಳೂರು

ಪ್ರತಿಯನ್ನು:-

1. ಕರ್ನಾಟಕ ಮಹಾಲೇಖಪಾಲರು, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಕಲ್ಯಾಣ ಇಲಾಖೆ, ಬೆಂಗಳೂರು.
3. ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ವೆಚ್ಚ-3, ಬೆಂಗಳೂರು
4. ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆ.
5. ಉಪ ನಿರ್ದೇಶಕರು, ಖಜಾನೆ ಗಣಕೀಕರಣ ಕೇಂದ್ರ, 2ನೇ ಮಹಡಿ, ಖನಿಜ ಭವನ, ಬೆಂಗಳೂರು.
6. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ ಬೆಂಗಳೂರು
7. ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ರಾಯಚೂರು ಜಿಲ್ಲೆ.
8. ಜಿಲ್ಲಾ ಖಜಾನಾಧಿಕಾರಿಗಳು, ರಾಯಚೂರು ಜಿಲ್ಲೆ.
9. ಲೆಕ್ಕಪತ್ರ ಶಾಖೆ.
10. ಕಛೇರಿ ಪ್ರತಿ.
11. ಹೆಚ್ಚುವರಿ ಪ್ರತಿ.